**All India Radio: Bangalore**
**Regional Bulletin In Kannada**
**09.12.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ತೊಗರಿ ಬೆಳೆಗೆ ಕನಿಷ್ಠ ಬೆಂಬಲ ಬೆಲೆ ನಿಗದಿ ಪಡಿಸುವಂತೆ ಪ್ರಧಾನಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ
2. ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ವಿಶ್ವದ ಎರಡನೇ ಅತಿದೊಡ್ಡ ಖಾದಿ ರಾಷ್ಟ್ರೀಯ ಧ್ವಜ ಅನಾವರಣ
3. ಮಹಿಳೆಯರಿಗೆ ಋತುಚಕ್ರ ರಜೆ ನೀಡಿದ್ದ ರಾಜ್ಯ ಸರ್ಕಾರದ ಆದೇಶಕ್ಕೆ ಉಚ್ಚನ್ಯಾಯಾಲಯ ಮಧ್ಯಂತರ ತಡೆ
4. ಕೃಷ್ಣ ಮೇಲ್ದಂಡೆ ಯೋಜನೆ ಹಂತ-೩ : ೨ ಸಾವಿರದ ೫೪೩ ಎಕರೆ ಜಮೀನು ಭೂಸ್ವಾಧೀನ - ವಿಧಾನಸಭೆಯಲ್ಲಿ ಉಪಮುಖ್ಯಮಂತ್ರಿ ಸ್ಪಷ್ಟನೆ
5. ಬೆಳಗಾವಿಯಲ್ಲಿ ರಾಜ್ಯ ಸರ್ಕಾರದ ಆಡಳಿತ ವೈಫಲ್ಯ ಖಂಡಿಸಿ ಬಿಜೆಪಿ ಪ್ರತಿಭಟನೆ - ಸುವರ್ಣ ಸೌಧಕ್ಕೆ ಮುತ್ತಿಗೆ ಯತ್ನ

<><><><>

ಕರ್ನಾಟಕದಲ್ಲಿ ತೊಗರಿ ಬೆಳೆಗಾರರು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ತೊಗರಿ ಬೆಳೆಗೆ ಕನಿಷ್ಠ ಬೆಂಬಲ ಬೆಲೆ ನಿಗದಿಪಡಿಸಬೇಕು ಮತ್ತು ನಾಫೆಡ್ ಹಾಗೂ ಎನ್‌ಸಿಸಿಎಫ್ ಮೂಲಕ ಖರೀದಿಗೆ ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದಾರೆ. ಮುಂಗಾರು ಹಂಗಾಮಿನಲ್ಲಿ ರಾಜ್ಯದಲ್ಲಿ ಸುಮಾರು ೧೨ ಲಕ್ಷ ೮೦ ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ತೊಗರಿ ಬೆಳೆದಿದ್ದು, ಅಂದಾಜು ೧೨ ಲಕ್ಷ ೬೦ ಸಾವಿರ ಮೆಟ್ರಿಕ್ ಟನ್ ತೊಗರಿ ಉತ್ಪಾದನೆಯಾಗಿದೆ. ಕಲಬುರಗಿ, ಯಾದಗಿರಿ, ಬೀದರ್, ರಾಯಚೂರು ಮತ್ತಿತರ ಜಿಲ್ಲೆಗಳಲ್ಲಿ ತೊಗರಿಯನ್ನು ಬೆಳೆಯಲಾಗಿದ್ದು, ಆ ಭಾಗದ ರೈತರು, ಬೆಲೆ ಇಳಿಕೆಯಿಂದ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸದ್ಯ ಮಾರುಕಟ್ಟೆ ದರ ೫ ಸಾವಿರದ ೮೦೦ರಿಂದ ೬ ಸಾವಿರದ ೭೦೦ ರೂಪಾಯಿಗಳಷ್ಟಿದೆ. ಸರ್ಕಾರ ತೊಗರಿ ಬೆಳೆಗೆ ೨೦೨೫-೨೬ನೇ ಸಾಲಿನಲ್ಲಿ ೮ ಸಾವಿರ ರೂಪಾಯಿ ಘೋಷಿಸಿತ್ತು. ಆದರೆ, ಮಾರುಕಟ್ಟೆಯಲ್ಲಿ ದರ ಕಡಿಮೆಯಾಗಿರುವುದರಿಂದ, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಕನಿಷ್ಠ ಬೆಂಬಲ ಬೆಲೆ ನಿಗದಿಗೆ ರಾಜ್ಯ ಸರ್ಕಾರ ಈಗಾಗಲೇ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಿದೆ. ರೈತರಿಗೆ ನ್ಯಾಯಯುತ ಬೆಲೆ ದೊರಕಿಸಿಕೊಡಲು ಹಾಗೂ ಅವರು ಬೆಳೆದ ಬೆಳೆಗಳನ್ನು ಖರೀದಿಸಲು, ಕೇಂದ್ರ ಸರ್ಕಾರ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರಧಾನಿ ಅವರನ್ನು ಒತ್ತಾಯಿಸಿದ್ದಾರೆ.

<><><><>

ವಿಶ್ವದಲ್ಲೇ ಎರಡನೇ ಅತಿದೊಡ್ಡ ಖಾದಿ ರಾಷ್ಟ್ರೀಯ ಧ್ವಜವನ್ನು ಬೆಳಗಾವಿ ಸುವರ್ಣ ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಇಂದು ಪ್ರದರ್ಶಿಸಲಾಗಿದ್ದು, ಮುಖ್ಯಮಂತ್ರಿ ಸಿದ್ಧರಾಮಯ್ಯ ಉದ್ಘಾಟಿಸಿದರು. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವಿಧಾನ ಸಭೆಯ ಸಭಾಧ್ಯಕ್ಷ ಯು.ಟಿ.ಖಾದರ್ ಫರೀದ್, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್ ಸೇರಿದಂತೆ ಹಲವು ಸಚಿವರು ಹಾಗೂ ಶಾಸಕರು ರಾಷ್ಟ್ರಧ್ವಜ ಅನಾವರಣಕ್ಕೆ ಸಾಕ್ಷಿಯಾದರು. ಕಲಬುರಗಿ ಜಿಲ್ಲೆಯ ಕಾಮಲಾಪುರದ ವಿನೋದ್ ಕುಮಾರ್ ರೇವಪ್ಪ ಬಮ್ಮನ್ನ ಕುಟುಂಬಸ್ಥರು ವೈಯಕ್ತಿಕ ಆಸಕ್ತಿಯಿಂದ

ಮಾಡಲ್ಪಟ್ಟಿರುವ ಈ ಖಾದಿ ರಾಷ್ಟ್ರಧ್ವಜ ಐತಿಹಾಸಿಕ ದಾಖಲೆಯಾಗಿದೆ. ಬಳಿಕ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ತ್ರಿವರ್ಣ ಧ್ವಜ ದೇಶದ ಪ್ರತಿಯೊಬ್ಬರ ಸ್ವಾಭಿಮಾನದ ಸಂಕೇತವಾಗಿದೆ ಎಂದು ತಿಳಿಸಿದ್ದಾರೆ.

<><><><>

ಮಹಿಳೆಯರಿಗೆ ಋತುಚಕ್ರ ರಜೆ ನೀಡಿ, ಸರ್ಕಾರ ಹೊರಡಿಸಿದ್ದ ಅಧಿಸೂಚನೆಗೆ ಉಚ್ಚ ನ್ಯಾಯಾಲಯ ತಡೆ ನೀಡಿ ಮಧ್ಯಂತರ ಆದೇಶ ಹೊರಡಿಸಿದೆ. ನ್ಯಾಯಾಧೀಶರಾದ ಎಂ. ಜ್ಯೋತಿ ನೇತೃತ್ವದ ಪೀಠ ಅರ್ಜಿ ವಿಚಾರಣೆ ನಡೆಸಿ, ಆಕ್ಷೇಪಣೆ ಸಲ್ಲಿಸಲು ಸರ್ಕಾರಕ್ಕೆ ಅವಕಾಶ ನೀಡಿದೆ. ಚಳಿಗಾಲದ ರಜೆ ಮುಗಿದ ಬಳಿಕ ಆಕ್ಷೇಪಣೆ ಸಲ್ಲಿಸುವಂತೆ ತಿಳಿಸಿ ಮಧ್ಯಂತರ ತಡೆ ನೀಡಿದೆ. ಸರ್ಕಾರದ ಅಧಿಸೂಚನೆ ಪ್ರಶ್ನಿಸಿ ಹೋಟೆಲ್ ಮಾಲೀಕರ ಸಂಘ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದೆ.

<><><><>

ರಾಜ್ಯಾದ್ಯಂತ ಕಳೆದ ಮೂರು ವರ್ಷಗಳಲ್ಲಿ ೫೭ ಸಾವಿರದ ೭೭೩ ಅಪರಾಧ ಪ್ರಕರಣಗಳು ದಾಖಲಾಗಿದ್ದು, ಸೈಬರ್ ವಂಚಕರಿಂದ ಜನಸಾಮಾನ್ಯರು ೫ ಸಾವಿರದ ೪೭೩ ಕೋಟಿ ರೂಪಾಯಿಗಿಂತ ಹೆಚ್ಚು ಹಣ ಕಳೆದುಕೊಂಡಿದ್ದಾರೆ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ಪ್ರಶ್ನೋತ್ತರ ಕಲಾಪದಲ್ಲಿ ಶಾಸಕ ಸಿಮೆಂಟ್ ಮಂಜು ಪ್ರಶ್ನೆಗೆ ಉತ್ತರಿಸಿದ ಗೃಹಸಚಿವ ಡಾ.ಜಿ. ಪರಮೇಶ್ವರ್ ೨೦೨೩ರಲ್ಲಿ ೨೨ ಸಾವಿರದ ೨೫೫ ಸೈಬರ್ ವಂಚನೆ ಪ್ರಕರಣ ದಾಖಲಾಗಿದ್ದು, ೮೭೩ ಕೋಟಿ ರೂಪಾಯಿ ವಂಚನೆಯಾಗಿದೆ. ೧೭೭ ಕೋಟಿ ರೂಪಾಯಿ ವಸೂಲಿ ಮಾಡಲಾಗಿದೆ ಎಂದು ಹೇಳಿದ್ದಾರೆ. ಸೈಬರ್ ವಂಚನೆ ಪ್ರಕರಣವನ್ನು ಶೀಘ್ರವಾಗಿ ಪತ್ತೆ ಹಚ್ಚಲು ೪೩ ಸೈಬರ್ ಪೊಲೀಸ್ ಠಾಣೆಗಳನ್ನು ಆರಂಭಿಸಲಾಗಿದ್ದು ಸೈಬರ್ ಕಮಾಂಡ್ ರಚಿಸಲಾಗಿದೆ ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ. ಬಿಜೆಪಿಯ ಉಮಾನಾಥ ಕೋಟ್ಯಾನ್ ಅವರ ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್, ರಾಜ್ಯದಲ್ಲಿ ಕಳೆದ ಐದು ವರ್ಷದಿಂದ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಹುದ್ದೆ ನೇಮಕವಾಗಿಲ್ಲ. ೫೪೫ ಸಬ್‌ಇನ್ಸ್‌ಪೆಕ್ಟರ್ ಹುದ್ದೆಗೆ ನೇಮಕ ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಆಲಮಟ್ಟಿ ಆಣೆಕಟ್ಟನ್ನು ೫೧೯ರಿಂದ ೫೨೪ ಮೀಟರ್‌ಗೆ ಹೆಚ್ಚಿಸುವ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ ೩ಕ್ಕೆ ಒಟ್ಟು ೧೮೮ ಗ್ರಾಮಗಳ ೭೫ ಸಾವಿರದ ೫೬೩ ಎಕರೆ ಜಮೀನು ಮುಳುಗಡೆಯಾಗುತ್ತಿದೆ. ಈ ಪೈಕಿ ೨ ಸಾವಿರದ ೫೪೩ ಎಕರೆ ಜಮೀನನ್ನು ಭೂ ಸ್ವಾಧೀನ ಪಡಿಸಿಕೊಂಡು ಪರಿಹಾರ ವಿತರಿಸಲಾಗಿದೆ ಎಂದು ಜಲಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ವಿಧಾನಸಭೆ ಪ್ರಶ್ನೋತ್ತರ ಕಲಾಪದಲ್ಲಿ ಹಿರಿಯ ಸದಸ್ಯ ಬಸನಗೌಡ ಆರ್.ಪಾಟೀಲ್ ಯತ್ನಾಳ್ ಅವರ ಪ್ರಶ್ನೆಗೆ ಉತ್ತರಿಸಿದ ಜಲಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್ ಕೃಷ್ಣಾ ಮೇಲ್ದಂಡೆ ಯೋಜನೆಗೆ ಭೂ ಸ್ವಾಧೀನ, ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಸೇರಿದಂತೆ ೫೦ ಸಾವಿರ ೪೫೨ ಕೋಟಿ ರೂಪಾಯಿ ವೆಚ್ಚ ಮಾಡಲಾಗಿದೆ ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರ ಆವಾರ್ಡ್ ಪಾಸ್ ಮಾಡಿದರೆ ಮೂರು ನಾಲ್ಕು ವರ್ಷಗಳಲ್ಲಿ ಭೂ ಸ್ವಾಧೀನ ಪೂರ್ಣಗೊಳಿಸಿ ಯೋಜನೆಯನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಭೂ ಪರಿಹಾರಕ್ಕೆ ದರ ನಿಗದಿ ಸಂಬಂಧಿಸಿದಂತೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತಿನಿಂದ ತೃಪ್ತರಾಗದ ಬಸನಗೌಡ ಪಾಟೀಲ್ ಯತ್ನಾಳ್ ಸಭಾತ್ಯಾಗ ನಡೆಸಿದರು.

<><><><>

ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆಯ ಪುನಶ್ಚೇತನಕ್ಕೆ ಸರ್ಕಾರ ಕ್ರಮ ವಹಿಸಲಿದೆ ಎಂದು ಜವಳಿ, ಸಕ್ಕರೆ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಎಸ್ ಪಾಟೀಲ್ ತಿಳಿಸಿದ್ದಾರೆ. ಪರಿಷತ್‌ನಲ್ಲಿ ಸದಸ್ಯ ಭೀಮರಾಯ ಬಸವರಾಜ ಪಾಟೀಲ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು, ಕಾರ್ಖಾನೆಯ ಪುನಶ್ಚೇತನ ಪ್ರಕ್ರಿಯೆ ೨೦೨೨ರಿಂದಲೇ ಆರಂಭವಾಗಿದೆ ಎಂದು ಹೇಳಿದ್ದಾರೆ. ಈ ವೇಳೆ ಮಧ್ಯಪ್ರವೇಶಿಸಿದ ಬಸವರಾಜ ಪಾಟೀಲ

ಅವರು, ಇದು ಬೀದರ್ ಜಿಲ್ಲೆಯ ಮೊದಲ ಕಾರ್ಖಾನೆಯಾಗಿದ್ದು, ೨೫ ಸಾವಿರ ರೈತರು ಷೇರು ಹೊಂದಿದ್ದಾರೆ. ಯಾರಿಗಾದರೂ ಗುತ್ತಿಗೆ ನೀಡಿಯಾದರೂ ಕಾರ್ಖಾನೆ ಆರಂಭಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದ್ದಾರೆ.

<><><><>

ನಗರ ಸ್ಥಳೀಯ ಸಂಸ್ಥೆಗಳಾದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರ ಗೌರವ ಧನವನ್ನು ಹೆಚ್ಚಿಸಲು ಸರ್ಕಾರ ಬದ್ಧವಾಗಿದೆ ಎಂದು ಪೌರಡಳಿತ ಸಚಿವ ರಹೀಂಖಾನ್ ವಿಧಾನಪರಿಷತ್‌ನಲ್ಲಿ ಭರವಸೆ ನೀಡಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ಸುನೀಲ್ ಗೌಡ ಪಾಟೀಲ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು ಈಗಾಗಲೇ ಪ್ರಸ್ತಾವನೆ ಕಳುಹಿಸಲಾಗಿದ್ದು, ಆರ್ಥಿಕ ಇಲಾಖೆ ಒಪ್ಪಿಗೆ ಸೂಚಿಸಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಆದರೆ ಚುನಾಯಿತ ಸದಸ್ಯರಿಗೆ ಉಚಿತ ಬಸ್‌ಪಾಸ್, ಪಿಂಚಣಿ ಹಾಗೂ ಟೋಲ್‌ಫ್ರೀ ಪಾಸ್ ನೀಡುವ ಪ್ರಸ್ತಾವನೆ ನಗರಾಭಿವೃದ್ಧಿ ಇಲಾಖೆಯ ಪರಿಶೀಲನೆಯಲ್ಲಿ ಇರುವುದಿಲ್ಲ ಎಂದು ತಿಳಿಸಿದ್ದಾರೆ.

<><><><>

ಕೇಂದ್ರ ಸರ್ಕಾರ ಪುರಸ್ಕೃತ ಅಮೃತ್ ಯೋಜನೆಯಡಿ ಕಲ್ಯಾಣ ಕರ್ನಾಟಕದ ಆರು ನಗರಗಳು ಆಯ್ಕೆಯಾಗಿವೆ ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬೈರತಿ ಸುರೇಶ್ ವಿಧಾನ ಪರಿಷತ್‌ನಲ್ಲಿ ತಿಳಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿಂದು ಅವರು, ಸದಸ್ಯ ಸುನೀಲ್ ವಲ್ಯಾಪುರೆ ಅವರ ಪ್ರಶ್ನೆಗೆ ಉತ್ತರಿಸಿ, ಕಲಬುರಗಿ, ಬಳ್ಳಾರಿ, ಬೀದರ್, ಗಂಗಾವತಿ, ಹೊಸಪೇಟೆ ಮತ್ತು ರಾಯಚೂರು ನಗರಗಳು ಈ ಯೋಜನೆಗೆ ಆಯ್ಕೆಯಾಗಿದ್ದು, ವಿವಿಧ ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ಹೇಳಿದ್ದಾರೆ. ಕಲಬುರಗಿ ಮಹಾನಗರಕ್ಕೆ ಹೊಂದಿಕೊಂಡಿರುವ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಬಡಾವಣೆಗಳಲ್ಲಿ ಮೂಲಸೌಕರ್ಯ ಕಲ್ಪಿಸಲು ಈ ಯೋಜನೆಯಡಿಯಲ್ಲಿ ಅವಕಾಶ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಬೆಳಗಾವಿಯಲ್ಲಿ ರಾಜ್ಯ ಸರ್ಕಾರದ ಆಡಳಿತ ವೈಫಲ್ಯ, ಪ್ರಗತಿ ಕುಂಠಿತ, ಬೆಲೆ ಏರಿಕೆ, ರೈತರಿಗೆ ಅನ್ಯಾಯ, ಭ್ರಷ್ಟಾಚಾರ ಆರೋಪಿಸಿ ಇಂದು ಬಿಜೆಪಿ ನಾಯಕರು ಸುವರ್ಣ ಸೌಧದ ಸಮೀಪ ಬೃಹತ್ ಪ್ರತಿಭಟನೆ ನಡೆಸಿದರು. ಪ್ರತಿಭಟನೆಯಲ್ಲಿ ಪ್ರತಿಪಕ್ಷ ನಾಯಕ ಆರ್.ಅಶೋಕ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಜಗದೀಶ್ ಶೆಟ್ಟರ್, ಈರಣ್ಣ ಕಡಾಡಿ ಸೇರಿದಂತೆ ಹಲವು ಮುಖಂಡರು ಪಾಲ್ಗೊಂಡು ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಬಳಿಕ ಬೃಹತ್ ಮೆರವಣಿಗೆ ಮೂಲಕ ಸುವರ್ಣ ಸೌಧದತ್ತ ತೆರಳಿ ಮುತ್ತಿಗೆ ಹಾಕಲು ಯತ್ನಿಸಿದರು. ಈ ವೇಳೆ ಸುವರ್ಣ ಸೌಧಕ್ಕೆ ಮುತ್ತಿಗೆ ಹಾಕಲು ಯತ್ನಿಸಿದ ಪ್ರತಿಭಟನಾ ನಿರತ ಮುಖಂಡರನ್ನು ಹಾಗೂ ಕಾರ್ಯಕರ್ತರನ್ನು ಪೊಲೀಸರು ಅಲಾರವಾಡ್ ತಿರುವಿನಲ್ಲಿ ತಮ್ಮ ವಶಕ್ಕೆ ಪಡೆದುಕೊಂಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>